ಇ) ಈ ವಿಷಯಗಳು ಸರ್ಕಾರದ ಪರಿಶೀಲನೆಯಲ್ಲಿದೆ

ಈ) ಹೆಚ್ಚಿಸುವ ಬಗ್ಗೆ ಶೀಘ್ರದಲ್ಲಿಯೇ ಅಂತಿಮ ತೀರ್ಮಾನಕ್ಕೆಗೊಳ್ಳಲಾಗುವುದು.

ಅಧ್ಯಕ್ಷರು : ಮಂಡಿಸಲಾಯಿತು.

3. ಅರ್ಜಿಗಳನ್ನೊಪ್ಪಿಸುವುದು.

ಶ್ರೀ ರಾಜಶೇಖರ ವಿ. ಶೀಲವಂತ (ಗುಳೇದಗುಡ್ಡ) : ಮಾನ್ಯ ಅಧ್ಯಕ್ಷರೇ, ಹಿಂದುಳಿದ ಹಾಗೂ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವೈದ್ಯಕೀಯ ಮತ್ತು ತಾಂತ್ರಿಕ ಮಹಾ ವಿದ್ಯಾಲಯಗಳಿಗೆ ಸೇರಲು ವರಮಾನ ಹಾಗೂ ಜಾತಿ ಪ್ರಮಾಣ ಪತ್ರಗಳನ್ನು ವಿತರಣೆ ಮಾಡುವಲ್ಲಿ ಇರುವ ಗೊಂದಲದ ಬಗ್ಗೆ ಅರ್ಜಿಯನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

ಶ್ರೀ ಯು. ಬಿ.ಬಣಕಾರ್ (ಹಿರೇಕೆರೂರು) : ಮಾನ್ಯ ಅಧ್ಯಕ್ಷರೇ, ೧೯೮೮ರಿಂದ ೧೯೯೭ರವರೆಗೆ ಹಿರೇಕೆರೂರು ಪಟ್ಟಣದಲ್ಲಿ ಅಂಜುಮಾನ್ ಇಸ್ಲಾಂ ಕಮಿಟಿಗೆ ಸಂಬಂಧಿಸಿದಂತೆ ಜಮಾ ಖರ್ಚಿನಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಹಾಗೂ ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಮತಿಘಟ್ಟದ ಶ್ರೀ ಜಯಭಾರತಿ ವಿದ್ಯಾಪೀಠ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕರ ಹುದ್ದೆಗೆ ಅನುಮೋದನೆ ನೀಡುವ ಬಗೆಗಿನ ಅರ್ಜಿಗಳನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

ಶ್ರೀ ಕುಂಬ್ಳೆ ಸುಂದರರಾವ್ (ಸುರತ್ಕಲ್) : ಮಾನ್ಯ ಅಧ್ಯಕ್ಷರೇ, ಉಡುಪಿ ತಾಲ್ಲೂಕಿನ ಸಾಬ್ರಕಟ್ಟೆಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯಾಧಿಕಾರಿಯಾಗಿ ಕಾರ್ಯ ನಿರ್ವಹಿಸಿರುವ ಡಾ. ಕೆ. ಗಂಗಾಧರ ನಂಬಿಯಾರ್‌ಇವರ ಹುದ್ದೆಗೆ ವೇತನ ನಿಗದಿಪಡಿಸುವ ಬಗ್ಗೆ ಅರ್ಜಿಯನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು : ಅರ್ಜಿಗಳನ್ನು ಒಪ್ಪಿಸಬೇಕಾದ ೧೨ ಜನರ ಪೈಕಿ ೮ ಜನರು ಗೈರು ಹಾಜರಾಗಿದ್ದಾರೆ. ಅವರು ತಮ್ಮ ಗೈರು ಹಾಜರಿಗೆ ಕಾರಣವನ್ನೂ ಕೂಡ ನನಗೆ ತಿಳಿಸಿಲ್ಲ ಮತ್ತು ಅರ್ಜಿಗಳನ್ನು ಮಂಡಿಸಬೇಕೆಂದೂ ಸಹ ನನಗೆ ಹೇಳಿಲ್ಲ. ಈಗ ಶೂನ್ಯ ವೇಳೆ.

4. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

ವಿಷಯ : (ಅ) ಬೆಂಗಳೂರಿನ ಮಹಾಲೇಖಪಾಲಕರ ಕಛೇರಿಯಲ್ಲಿ ತಮಿಳು ಭಾಷೆ ಬಲ್ಲವರನ್ನು ಮರು ನೇಮಕಾತಿ ಮಾಡಿರುವ ಬಗ್ಗೆ

ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಅಧ್ಯಕ್ಷರೇ, ಒಂದು ವಿಚಾರವನ್ನು ನಾನು ನಿನ್ನೆಯಿಂದ ತಮ್ಮ ಗಮನಕ್ಕೆ ತರುತ್ತಿದ್ದೇನೆ. ಮಹಾಲೇಖಪಾಲಕರ ಕಛೇರಿಯಲ್ಲಿ ತಮಿಳರನ್ನು ನೇಮಕ ಮಾಡಿರುವ ಬಗ್ಗೆ ಕರ್ನಾಟಕ ರಾಜ್ಯಾದ್ಯಂತ ದೊಡ್ಡ ಹೋರಾಟ ನಡೆದಾಗ ಕೇಂದ್ರ ಸರ್ಕಾರವನ್ನು ನೇಮಕಾತಿ ಆದೇಶವನ್ನು ಹಿಂದಕ್ಕೆ ಪಡೆದಿತ್ತು. ಆದರೆ ಈಗ ಮತ್ತೊಮ್ಮೆ ಅದೇ ನೌಕರರನ್ನು ಆ ಕಛೇರಿಗೆ ಪುನ: ನೇಮಕಾತಿ ಮಾಡಲಾಗಿದೆ ಎಂದು ಮಾನ್ಯ ಪ್ರಧಾನ ಮಂತ್ರಿಗಳು ತಮಿಳುನಾಡಿನ ಮುಖ್ಯಮಂತ್ರಿಗಳಾದ ಶ್ರೀ ಕರುಣಾನಿಧಿಯವರಿಗೆ ಬರೆದ ಪತ್ರದಲ್ಲಿ ತಿಳಿಸಿದ್ದಾರೆ. ಇದರಿಂದಾಗಿ ಬಹಳ ಗಂಭೀರವಾದಂತಹ ಪರಿಸ್ಥಿತಿ ಉದ್ಭವವಾಗುತ್ತಿದೆ. ಈ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳು ಸ್ಪಷ್ಟ